ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ : ಇಡಿ/ಕೆಇಎ/ನೇ.ವಿ/13/2026 ದಿನಾಂಕ: 11.09.2026

**ಪೊಲೀಸ್ ಇಲಾಖೆಯಿಂದ ಅಧಿಸೂಚಿಸಲಾದ ಉಳಿಕೆ ಮೂಲ ವೃಂದ ಮತ್ತು ಕಲ್ಯಾಣ ಕರ್ನಾಟಕ ವೃಂದದ ಸಶಸ್ತ್ರ ಪೊಲೀಸ್ ಕಾನ್ಸ್‌ಟೇಬಲ್ (CAR/DAR) ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯ ತಾತ್ಕಾಲಿಕ ಫಲಿತಾಂಶ ಪ್ರಕಟಿಸಿರುವ ಬಗ್ಗೆ.**

ಅಧಿಸೂಚನೆ ಸಂಖ್ಯೆ: 04/ನೇಮಕಾತಿ-5(ಎ)/2026-27(ಆರ್.ಪಿ.ಸಿ) ದಿನಾಂಕ: 19.06.2026
ಅಧಿಸೂಚನೆ ಸಂಖ್ಯೆ: 04/ನೇಮಕಾತಿ-5 (ಬಿ)/2026-27(ಕ.ಕ) ದಿನಾಂಕ: 19.06.2026

*****

ಕರ್ನಾಟಕ ಪರೀಕ್ಷಾ ಪ್ರಾಧಿಕಾರಿದಂದ ಕಲ್ಯಾಣ ಕರ್ನಾಟಕ ವೃಂದದ ಸಶಸ್ತ್ರ ಪೊಲೀಸ್ ಕಾನ್ಸ್ ಟೇಬಲ್ (CAR/DAR) ನೇಮಕಾತಿ ಸಂಬಂಧ ದಿನಾಂಕ 06.09.2026 ರಂದು ನಡೆದ ಸ್ಪರ್ಧಾತ್ಮಕ ಪರೀಕ್ಷೆಗಳ ಕೀ ಉತ್ತರಗಳನ್ನು ದಿನಾಂಕ 07.09.2026 ರಂದು ಪ್ರಕಟಿಸಿ ದಿನಾಂಕ 09.09.2026 ರ ಬೆಳಿಗ್ಗೆ 10.30 ರವರೆಗೆ ಆಕ್ಷೇಪಣೆ ಸಲ್ಲಿಸಲು ಕಾಲಾವಕಾಶ ನೀಡಲಾಗಿತ್ತು.

ಅದರಂತೆ ಅಭ್ಯರ್ಥಿಗಳಿಂದ ಸ್ವೀಕೃತವಾದ ಆಕ್ಷೇಪಣೆಗಳನ್ನು ವಿಷಯ ತಜ್ಞರ ಮೂಲಕ ಪರಿಶೀಲಿಸಿ ದಿನಾಂಕ: 10.09.2026 ರಂದು ಪರಿಷ್ಕೃತ ಕೀ ಉತ್ತರಗಳನ್ನು ಪ್ರಕಟಿಸಲಾಗಿರುತ್ತದೆ.

ಪರಿಷ್ಕೃತ ಕೀ ಉತ್ತರಗಳನ್ವಯ ಅಭ್ಯರ್ಥಿಗಳು ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳ ತಾತ್ಕಾಲಿಕ ಫಲಿತಾಂಶವನ್ನು ಪ್ರಾಧಿಕಾರದ ವೆಬ್ ಸೈಟ್ ನಲ್ಲಿ ಪ್ರಕಟಿಸಲಾಗಿದ್ದು, ತಾತ್ಕಾಲಿಕ ಫಲಿತಾಂಶಕ್ಕೆ ಆಕ್ಷೇಪಣೆಗಳಿದ್ದಲ್ಲಿ ದಿನಾಂಕ 14.09.2026 ಸಂಜೆ 5.30 ರೊಳಗೆ ನಿಗದಿತ ಲಿಂಕ್ (https://cetonline.karnataka.gov.in/kea/) ಮೂಲಕ ಪೂರಕ ದಾಖಲೆಗಳೊಂದಿಗೆ ಸಲ್ಲಿಸತಕ್ಕದ್ದು. ಪೂರಕ ದಾಖಲೆಗಳಿಲ್ಲದ ಹಾಗೂ ಕೀ ಉತ್ತರಗಳಿಗೆ ಸಲ್ಲಿಸಲಾಗುವ ಆಕ್ಷೇಪಣೆಗಳನ್ನು ಈ ಹಂತದಲ್ಲಿ ಪರಿಗಣಿಸಲಾಗುವುದಿಲ್ಲ.

ಕಾರ್ಯನಿರ್ವಾಹಕ ನಿರ್ದೇಶಕರು